ಹರಿಹರ ತಾಲ್ಲೂಕಿನ ಲೋಕೋಪಯೋಗಿ ಇಲಾಖೆಯ ರಸ್ತೆಗಳ ದುರಸ್ತಿ.

61 - ಶ್ರೀ ಹೆಚ್. ಶಿವಪ್ಪ (ಹರಿಹರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹರಿಹರ ತಾಲ್ಲೂಕಿನ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಕ್ಕೆಗೊಂಡಿ-ನಂದಿಗುಡಿ ರಸ್ತೆ ಹಾಗೂ ಮಲ್ಲೆಬೆನ್ನೂರು-ನಂದಿಗೂಡಿ ರಸ್ತೆ ಪ್ರಯಾಣಕ್ಕೆ ಯೋಗ್ಯವಿಲ್ಲದೇ ಇರುವುದು ನಿಜವೇ

ಆ) ಹಾಗಿದ್ದಲ್ಲಿ, ಸದರಿ ರಸ್ತೆಗಳನ್ನು ಸುಸ್ಥಿತಿಗೆ ತರಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು) :

ಅ) ಸದರಿ ರಸ್ತೆಗಳು ಸರ್ವಋತು ರಸ್ತೆಗಳಾಗಿದ್ದು ವಾಹನ ಸಂಚಾರಕ್ಕೆ ಯೋಗ್ಯವಾಗಿರುತ್ತವೆ. ಆದಾಗ್ಯೂ ರಸ್ತೆಗಳು ಭದ್ರಾ ಅಚ್ಚುಕಟ್ಟು ಪ್ರದೇಶದಲ್ಲಿ ಹಾದು ಹೋಗುವುದುರಿಂದ ರಸ್ತೆಗಳನ್ನು ಅಭಿವೃದ್ಧಿ ಪಡಿಸುವ ಅವಶ್ಯಕತೆ ಇರುತ್ತದೆ.

ಆ) ಪ್ರಸಕ್ತ ಎಕ್ಕೆಗುಂಡಿ-ನಂದಿಗೂಡಿ ರಸ್ತೆ ಅಭಿವೃದ್ಧಿಗೆ 3.00 ಲಕ್ಷ ರೂ.ಗಳ ಕಾಮಗಾರಿ ಪ್ರಗತಿಯಲ್ಲಿದೆ. ಅನುದಾನದ ಲಭ್ಯತೆಯನ್ನು ಅನುಸರಿಸಿ ಸದರಿ ರಸ್ತೆಗಳನ್ನು ಹಂತ ಹಂತವಾಗಿ ಅಭಿವೃದ್ಧಿ ಗೊಳಿಸಲಾಗುವುದು.

ಟಿ. ನರಸೀಪುರ ತಾಲ್ಲೂಕಿನಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ.

62 - ಶ್ರೀ ಎಸ್. ಕೃಷ್ಣಪ್ಪ (ಬನ್ನೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಟಿ. ನರಸೀಪುರ ತಾಲ್ಲೂಕಿನಲ್ಲಿ ತಲಕಾಡು ಮತ್ತು ಹೆಮ್ಮಿಗೆ ಗ್ರಾಮದ ಮಧ್ಯದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಸೇತುವೆ ಯಾವಾಗ ಪ್ರಾರಂಭವಾಯಿತು, ಇಲ್ಲಿಯವರೆಗೆ ಈ ಬಾಬ್ತಿಗೆ ಖರ್ಚಾಗಿರುವ ಹಣವೆಷ್ಟು, ಸೇತುವೆ ಕೆಲಸ ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು):

ಅ) ಕಾಮಗಾರಿ 1984ರಲ್ಲಿ ಪ್ರಾರಂಭವಾಯಿತು. ಇದುವರೆವಿಗೆ ಈ ಕಾಮಗಾರಿಗೆ ಆಗಿರುವ ವೆಚ್ಚ ರೂ. 38.00 ಲಕ್ಷಗಳು.

ಈ ಸೇತುವೆ ಬಾಕಿ ಕಾಮಗಾರಿಯ ಪರಿಷ್ಕೃತ ಅಂದಾಜು ರೂ. 232.00 ಲಕ್ಷಕ್ಕೆ ತಯಾರಿಸಲಾಗಿದೆ. ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು.